ಉದ್ದೇಶಿತ ಕಟ್ಟಡದ ಕಾಮಗಾರಿ ನಿರ್ಮಿಸಲು ರೂ.1.25 ಕೋಟಿಗಳ ಅಂದಾಜು ಪಟ್ಟಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನ ನೀಡಿದೆ. ಸರ್ಕಾರದ ಆದೇಶ ಸಂಖ್ಯೆ, ಕಸಂವಾಪ್ರ 234 ಕನಧ 2007, ದಿನಾಂಕ: 29–11–2007 ರನ್ವಯ ರೂ.1.00 ಕೋಟಿಗಳನ್ನು ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿತ್ತು. ಗೌರಿಬಿದನೂರು ತಾಲ್ಲೂಕು ಪ್ರಸ್ತುತ ಚಿಕ್ಕಬಳ್ಳಾಪುರ ಜಿಲ್ಲೆ ವ್ಯಾಪ್ತಿಗೆ ಬರಲಿದ್ದು, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಗೆ ಹಣ ವರ್ಗಾಯಿಸಲಾಗಿದೆ. ಕಾಮಗಾರಿ ಪ್ರಾರಂಭಿಸುವಂತೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (124)258
ಮಾನ್ಯ ಸದಸ್ಯರ ಹೆಸರು : ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿದಿದನೂರು)
ಉತ್ತರಿಸಬೇಕಾದವರು : (ಶ್ರೀ ಕಟ್ಟಾಸುಬ್ರಮಣ್ಯನಾಯ್ಡು)
: ಮಾನ್ಯ ಅಬಕಾರಿ ಸಚಿವರು

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ವ್ಯಾಪಕವಾಗಿ ಆಂಧ್ರ ಗಡೀ ಭಾಗದಲ್ಲಿ ಹೆಂಡ ಮಾರಾಟ ಮಾಡಿ ಜನರ ಆರೋಗ್ಯವನ್ನು ಹದಗೆಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಹೌದು.

ಆ) ಹಾಗಿದ್ದಲ್ಲಿ, ಇದರ ಬಗ್ಗೆ ಇಲಾಖಾ ಅಧಿಕಾರಿಗಳು ಕ್ರಮ ಕೈಗೊಳ್ಳಲು ನಿರ್ಲಕ್ಷ ವಹಿಸುತ್ತಿದ್ದು, ಈ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಳ್ಳುವ ಕಟ್ಟುನಿಟ್ಟಿನ ಕ್ರಮವೇನು'

ಗೌರಿಬಿದನೂರು ತಾಲ್ಲೂಕಿನ ಕೆಲವು ಹಳ್ಳಿಗಳು ಆಂದ್ರಪ್ರದೇಶದ ಗಡಿ ಭಾಗದಲ್ಲಿರುತ್ತದೆ. ಈ ಹಳ್ಳಿಗಳಿಗೆ ಅಕ್ರಮವಾಗಿ ಸೇಂದಿಯನ್ನು ತಂದು ಮಾರಾಟ ಮಾಡುತ್ತಿದ್ದ ಆಧಾರದ ಮೇಲೆ ಅಬಕಾರಿ ಇಲಾಖಾ ಅಧಿಕಾರಿಗಳು ಧಾಳಿ ನಡೆಸಿ ಹನ್ನೊಂದು ಮೊಕದ್ದಮೆಗಳನ್ನು ದಾಖಲು ಮಾಡಿರುತ್ತಾರೆ. ಕರ್ನಾಟಕ ಅಬಕಾರಿ ಕಾಯ್ದೆ ಹಾಗೂ ನಿಯಮಗಳಡಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ರೀತಿಯಲ್ಲಿ ನಿರ್ಲಕ್ಷತೆ ವಹಿಸದೆ ಕಾನೂನು ರೀತ್ಯಾ ಕ್ರಮ ಜರುಗಿಸುತ್ತಿದ್ದಾರೆ. ಹಾಗೂ ಮೊಕದ್ದಮೆ ಗಳನ್ನು ದಾಖಲು ಮಾಡಿ ಅಪರಾಧಿ ಗಳನ್ನು ನ್ಯಾಯಾಂಗ ವಶಕ್ಕೆ ನೀಡುತ್ತಿದ್ದಾರೆ. ಗಸ್ತು ಕಾರ್ಯ, ದಾಳಿ, ತನಿಖೆ ಇತ್ಯಾದಿಗಳನ್ನು ಕ್ರಮಬದ್ಧವಾಗಿ ನಡೆಸಿ ಅಕ್ರಮ ದಂಧೆಗೆ ತಡೆಯೊಡ್ಡುತ್ತಿದ್ದಾರೆ

ಇ) ಈ ದಂಧೆಗೆ ಕಾರಣವಾಗಿರುವ ಆಂಧ್ರ ಮೂಲದ ವ್ಯಕ್ತಿಯೊಬ್ಬರ ವಿರುದ್ಧ ಕೈಗೊಳ್ಳಲು ಉದ್ದೇಶಿಸಿರುವ ಕ್ರಮವೇನು;

ನೆರೆಯ ರಾಜ್ಯದ ಪೋಲೀಸ್ ಮತ್ತು ಅಬಕಾರಿ ಸಹಯೋಗದೊಂದಿಗೆ ಅಂತಹ ವ್ಯಕ್ತಿಯ ಬಗ್ಗೆ ಮಾಹಿತಿ ಪಡೆದು ಆತನನ್ನು ಪತ್ತೆ ಹಚ್ಚುವ ಕಾರ್ಯದಲ್ಲಿ ಅಧಿಕಾರಿಗಳು ಕಾರ್ಯನಿರತರಾಗಿರುತ್ತಾರೆ.

ಈ) ಈ ಅಕ್ರಮ ಹೆಂಡ ಮಾರಾಟದ ದಂಧೆಯನ್ನು ಸಂಪೂರ್ಣವಾಗಿ ನಿಲ್ಲಿಸಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಆಂದ್ರದ ಗಡಿ ಭಾಗದಲ್ಲಿ ತೀವ್ರ ನಿಗಾವಹಿಸಿ ಚಲನವಲನಗಳನ್ನು ಕಟ್ಟು ನಿಟ್ಟಾಗಿ ಪರಿಶೀಲಿಸಲಾತ್ತಿದೆ.ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಿ ಅಕ್ರಮ ಹೆಂಡ ಸರಬರಾಜಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಕ್ರಮ ಸೇಂದಿ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕರಪತ್ರಗಳನ್ನು ಹಂಚಲಾಗಿದೆ. ಗ್ರಾಮ ಸಭೆಗಳಲ್ಲಿ ಈ ಬಗ್ಗೆ ಸೂಕ್ತ ತಿಳುವಳಿಕೆಯನ್ನು ನೀಡಲಾಗಿದೆ. ಸಾರ್ವಜನಿಕರು ಮಾಹಿತಿ ನೀಡಲು ಕೋರಿ ಮಾಹಿತಿ ಕೇಂದ್ರದ ದೂರವಾಣಿ ಸಂಖ್ಯೆಗಳನ್ನು ಹಳ್ಳಿಗಳಲ್ಲಿ ತಿಳಿಸಲಾಗಿದೆ. ಅಬಕಾರಿ ಕಾರ್ಯಾಚರಣೆಯನ್ನು ಶಿಸ್ತು ಬದ್ಧವಾಗಿ ನಡೆಸಿ ಫಲಿತಾಂಶ ಆಧಾರಿತ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ.

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (125)259
2 ಸದಸ್ಯರ ಹೆಸರು : ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್.
3 ಉತ್ತರಿಸುವವರು : (ಶ್ರೀ ಎಸ್.ಸುರೇಶ್‌ಕುಮಾರ್)
: ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಅ) ಗೌರಿಬಿದನೂರು ತಾಲ್ಲೂಕಿನ ಯು.ಐ.ಡಿ.ಎಸ್.ಎಸ್.ಎಂ.ಟಿ ಯೋಜನೆಯಡಿಯಲ್ಲಿ ಪಟ್ಟಣವನ್ನು ಅಭಿವೃದ್ಧಿ ಪಡಿಸಲು ಯೋಜನೆ ಮಂಜೂರಾಗಿದ್ದು, ಇದುವರೆವಿಗೂ ಈ ಯೋಜನೆ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಯು.ಐ.ಡಿ.ಎಸ್.ಎಸ್.ಎಂ.ಟಿ ಯೋಜನೆಗೆ ಸಂಬಂಧಿಸಿದಂತೆ ಗೌರಿಬಿದನೂರು ಪುರಸಭೆಯಿಂದ ಯಾವುದೇ ಪ್ರಸ್ತಾವನೆಯು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಸದರಿ ಯೋಜನೆಯು ಈ ಪಟ್ಟಣಕ್ಕೆ ಮಂಜೂರಾಗಿರುವುದಿಲ್ಲ.

ಆ) ಹಾಗಿದ್ದಲ್ಲಿ, ಈ ಯೋಜನೆಯ ವಿಳಂಬಕ್ಕೆ ಕಾರಣವೇನು ಅನ್ವಯಿಸುವುದಿಲ್ಲ.

ಇ) ಈ ಯೋಜನೆಯನ್ನು ಜಾರಿಗೆ ತಂದು ಅಭಿವೃದ್ಧಿಪಡಿಸಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

2006–07 ನೇ ಸಾಲಿನ 2010–11ನೇ ಸಾಲಿನವರೆಗೆ ಯು.ಐ.ಡಿ.ಎಸ್.ಎಸ್.ಎಂ.ಟಿ ಯೋಜನೆಯಡಿ ಕೇಂದ್ರ ಸರ್ಕಾರವು ವಿವಿಧ ಯೋಜನೆಗಳಿಗೆ ನಿಗದಿಪಡಿಸಿದ್ದ ಅನುದಾನಕ್ಕಿಂತ ಹೆಚ್ಚಾಗಿ ಈಗಾಗಲೇ ಯೋಜನೆಗಳಿಗೆ ಮಂಜೂರಾತಿ ನೀಡಿರುವುದರಿಂದ ಗೌರಿಬಿದನೂರು ಪಟ್ಟಣವನ್ನು ಈ ಯೋಜನೆಯಡಿ ಸೇರಿಸಲು ಅವಕಾಶವಿರುವುದಿಲ್ಲ.